ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಬೀದರ್ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಶುಶ್ರೂಷಕಿಯರ ಹುದ್ದೆಗಳ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

1413 (1714) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಶುಶ್ರೂಷಕಿಯರ (ನರ್ಸ್) ಮಂಜೂರಾತಿ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಖಾಲಿ ಇರುವುದು ಎಷ್ಟು ; ಭರ್ತಿ ಮಾಡಿದ್ದರೆ ಯಾವ ಯಾವ ನಿಯಮದ ಪ್ರಕಾರ ಭರ್ತಿ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಹೊರಗುತ್ತಿಗೆ ಆಧಾರದ ಮೇಲೆ `ಡಿ' ಗ್ರೂಪ್ ನೌಕರರ ನೇಮಕಾತಿ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಯಾವ ನಿಯಮದ ಪ್ರಕಾರ ಮತ್ತು ಯಾವ ಆಧಾರದ ಮೇಲೆ, ಯಾರ ಅಧ್ಯಕ್ಷತೆಯಲ್ಲಿ ನೇಮಕಾತಿ ಮಾಡಲಾಗಿದೆ ; ನೇಮಕಾತಿಗಾಗಿ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)